1602(2010) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳು ಯಾವುವು; ಅವುಗಳಲ್ಲಿ ಲಾಭದಲ್ಲಿ ನಡೆಯುತ್ತಿರುವ ಸಂಸ್ಥೆಗಳು ಯಾವುವು;

ಆ. ನಷ್ಟದಲ್ಲಿ ನಡೆಯುತ್ತಿರುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳನ್ನು ಲಾಭದಾಯಕವಾಗಿ ಮಾಡಲು ಹಾಕಿಕೊಂಡಿರುವ ಕಾರ್ಯ ಕ್ರಮಗಳೇನು;

ಇ. ಗ್ರಾಮೀಣ ಭಾಗದ ಜನರಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲು ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ(ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ. 1. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ. ಬೆಂಗಳೂರು.

2. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.

3. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ.

4. ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಗುಲ್ಬರ್ಗಾ.

ಲಾಭದಲ್ಲಿ ನಡೆಯುತ್ತಿರುವ ಸಂಸ್ಥೆಗಳು:

1. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು.

2. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.

ಆ. 1. ವೋಲ್ವೋ, ಮಂಯೂರ (ಎ.ಸಿ.), ರಾಜಹಂಸ ವಾಹನಗಳ ಕಾರ್ಯಾಚರಣೆ ಮಾಡುವುದು.

2. ವಾಹನಗಳನ್ನು ಮೇಲ್ದರ್ಜೆಗೇರಿಸುವುದು.

3. ಉತ್ತೇಜಕ ಬಸ್ ದರಗಳನ್ನು ಅಳವಡಿಸುವುದು.

4. ಬಸ್ ನಿಲ್ದಾಣಗಳಲ್ಲಿ ಉತ್ತಮ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು.

5. ಪರಿಣಾಮಕಾರಿಯಾಗಿ ಅನುಸೂಚಿಗಳ ಕಾರ್ಯಾಚರಣೆ ಮಾಡುವುದು

6. ಸಂಸ್ಥೆಯ ಸಿಬ್ಬಂದಿಗಳಿಗೆ ಸೂಕ್ತ ತರಬೇತಿ ನೀಡುವುದು.

7. ಲೋ ಫ್ಲೋರ್ ಮಾದರಿಯ ಬಸ್ಸುಗಳ ಕಾರ್ಯಾಚರಣೆ ಮಾಡುವುದು, ಇತ್ಯಾದಿ.

ಇ. ಸಂಚಾರಕ್ಕೆ ಯೋಗ್ಯವಾದ ರಸ್ತೆಗಳು ಇರುವ ಹಳ್ಳಿಗಳಿಗೆ ಬಸ್ ಸಂಚಾರವನ್ನು ಒದಗಿಸುವುದು. ಜೊತೆಗೆ ಮಿನಿ ಬಸ್‌ಗಳು ಮತ್ತು ಗ್ರಾಮೀಣ ಸಾರಿಗೆ ಬಸ್ಸುಗಳನ್ನು ಗ್ರಾಮೀಣ ಪ್ರದೇಶದ ಪ್ರಯಾಣಿಕರ ಅನುಕೂಲಕ್ಕಾಗಿ ಪ್ರಾರಂಭಿಸುವುದು; ಕಡಿಮೆ ದೂರ ಪ್ರಯಾಣಿಸುವ ಗ್ರಾಮಾಂತರದ ಪ್ರಯಾಣಿಕರಿಗೆ ಮಿತವ್ಯಯಕರ ಪ್ರಯಾಣ ದರ ವಿಧಿಸಲು ಉಪಹಂತ ಪ್ರಯಾಣದರ ಪದ್ಧತಿಯನ್ನು ಜಾರಿಗೆ ತರುವುದು.